02693

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 64ಕ್ಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

"ದಿನಾಂಕ: 01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯಿಂದ ಸೂಕ್ತವಾದ ಪಿಂಚಣಿ ಸೌಲಭ್ಯವಿಲ್ಲದೆ, ನಿವೃತ್ತಿ ನಂತರದ ದಿನಗಳಲ್ಲಿ ಜೀವನ ನಿರ್ವಹಣೆ ಕಷ್ಟಕರವಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪಿಸಬಯಸುತ್ತೇನೆ".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಎಫ್.ಡಿ (ಎಸ್.ಪಿ.ಎಲ್) 203 ಪಿಇಎನ್ 2012 (ಪಿ), ದಿನಾಂಕ: 18.05.2016 ಮತ್ತು ಸರ್ಕಾರದ ಆದೇಶ ಸಂ:ಆಇ 201 ಪಿಇಎನ್ 2021 ದಿನಾಂಕ:29.11.2021ರನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನೌಕರರು ನಿವೃತ್ತರಾದರೆ/ಸೇವೆಯಲ್ಲಿರುವಾಗಲೇ ಮೃತರಾದರೆ/ರಾಜೀನಾಮೆ ನೀಡಿದ ಸಂದರ್ಭದಲ್ಲಿ ಅವರುಗಳ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಈ ಕೆಳಕಂಡಂತೆ ಇತ್ಯರ್ಥಪಡಿಸಲಾಗುವುದು:-

a ) ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನಿವೃತ್ತಿ ಹೊಂದಿದ ನೌಕರರ ಪ್ರಾನ್ ಖಾತೆಯಲ್ಲಿ ರೂ. 5.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರಿಗೆ ಪ್ರಾನ್ ಖಾತೆಯಲ್ಲಿರುವ ಸಂಪೂರ್ಣ ಮೊತ್ತವನ್ನು ಇತ್ಯರ್ಥ ಪಡಿಸಲಾಗುವುದು ಹಾಗೂ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 5.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 60% ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು ಉಳಿದ 40% ಮೊತ್ತವನ್ನು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.

b) ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ಸೇವೆಗೆ ರಾಜೀನಾಮೆ ನೀಡಿದ ನೌಕರರ ಪ್ರಾನ್ ಖಾತೆಯಲ್ಲಿ ರೂ. 2.50 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರ ಪ್ರಾನ್ ಖಾತೆಯಲ್ಲಿನ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು. ನೌಕರರ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 2.50 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಶೇ.20% ರಷ್ಟು ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು, ಉಳಿಕೆ ಶೇ. 80% ಮೊತ್ತವನ್ನು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.

c ) ನೌಕರರು ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ಪ್ರಾನ್ ಖಾತೆಯಲ್ಲಿ ರೂ. 5.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ, ಮೃತರ ನಾಮನಿರ್ದೇಶಿತರಿಗೆ ಸಂಪೂರ್ಣ



... from Office by G JAGADEESHA, CMO-JS(GJ), JOINT SECREATRY, CMO on 26/12/2022 10:19 AM

ಮೊತ್ತವನ್ನು ಇತ್ಯರ್ಥಪಡಿಸಲಾಗುವುದು. ಪ್ರಾನ್ ಖಾತೆಯಲ್ಲಿನ ಮೊತ್ತವು 5.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 20% ರಷ್ಟು ಮೊತ್ತವನ್ನು ಮೃತರ ನಾಮನಿರ್ದೇಶಿತರಿಗೆ ಇತ್ಯರ್ಥಪಡಿಸಲಾಗುವುದು ಹಾಗೂ 80% ರಷ್ಟು ಮೊತ್ತವು ಕಡ್ಡಾಯವಾಗಿ Annuity Service Provider ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬೇಕಿರುತ್ತದೆ.

ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ: ಆಇ 34 ಪಿಇಎನ್ 2018, ದಿನಾಂಕ: 23.06.2018ರಲ್ಲಿ ನಿವೃತ್ತಿ ಉಪದಾನ, ಮರಣ ಉಪದಾನ ಹಾಗೂ ಮೃತರ ನಾಮನಿರ್ದೇಶಿತರಿಗೆ ಕುಟುಂಬ ಪಿಂಚಣಿಯನ್ನು ಮೃತರ ನಾಮನಿರ್ದೇಶಿತರು ಆಯ್ಕೆ ಮಾಡಿಕೊಂಡಲ್ಲಿ ಮೃತ ನೌಕರರ ಪ್ರಾನ್ ಖಾತೆಯಲ್ಲಿರುವ ಸಂಪೂರ್ಣ ಮೊತ್ತವನ್ನು ಸರ್ಕಾರವು ಹಿಂಪಡೆಯುವ ಷರತ್ತಿಗೊಳಪಟ್ಟು, ಕರ್ನಾಟಕ ಸರ್ಕಾರಿ ನೌಕರರ (ಕುಟುಂಬ ಪಿಂಚಣಿ) ನಿಯಮಗಳು, 2002ರನ್ವಯ ಕುಟುಂಬ ಪಿಂಚಣಿ ಸೌಲಭ್ಯವನ್ನು ದಿನಾಂಕ:01.04.2018ರಿಂದ ಜಾರಿಗೆ ಬರುವಂತೆ ವಿಸ್ತರಿಸಿ ಆದೇಶಿಸಿದೆ.

ಸರ್ಕಾರದ ಆದೇಶದ ಸಂಖ್ಯೆ: ಆಇ-ಪಿಇಎನ್/264/2021, ದಿನಾಂಕ: 30.05.2022ರಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರು ದಿನಾಂಕ: 01.04.2018ರಂದು ಮತ್ತು ತದನಂತರ ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ನೌಕರರ ನಾಮನಿರ್ದೇಶಿತರು ಕುಟುಂಬ ಪಿಂಚಣಿಯನ್ನು ಆಯ್ಕೆ ಮಾಡಿಕೊಂಡಲ್ಲಿ ಪ್ರಾನ್ ಖಾತೆಯಲ್ಲಿ ಶೇಖರಣೆಗೊಂಡಿರುವ ಮೊತ್ತದಲ್ಲಿ ಮೃತ ನೌಕರರ ವಂತಿಗೆ ಮತ್ತು ಅದರ ಮೇಲಿನ ಆದಾಯವನ್ನು ಮೃತರ ನಾಮನಿರ್ದೇಶಿತರಿಗೆ ಇತ್ಯರ್ಥಪಡಿಸಲು ಹಾಗೂ ಸರ್ಕಾರದ ವಂತಿಗೆ ಮತ್ತು ಅದರ ಮೇಲಿನ ಆದಾಯವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ಜಮೆ ಮಾಡಲು ಆದೇಶಿಸಿದೆ.

ನಂತರ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯಗಳನ್ನು ಸರ್ಕಾರದ ಆದೇಶ ಸಂಖ್ಯೆ: ಆಇ 34 ಪಿಇಎನ್ 2018, ದಿನಾಂಕ: 23.06.2018 ರಲ್ಲಿ ದಿನಾಂಕ: 01.04.2018 ರಿಂದ ಜಾರಿಗೆ ಬರುವಂತೆ ಆದೇಶಿಸಿರುವುದನ್ನು ಮಾರ್ಪಡಿಸಿ, ನಿವೃತ್ತಿ ಉಪದಾನ, ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯಗಳನ್ನು ದಿನಾಂಕ: 01.04.2006 ರಿಂದಲೇ ಜಾರಿಗೆ ಬರುವಂತೆ ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/149/2022, ದಿನಾಂಕ: 19.10.2022ರಲ್ಲಿ ವಿಸ್ತರಿಸಿ ಆದೇಶಿಸಲಾಗಿದೆ.

ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

<u>ಸಂಖ್ಯೆ: ಆಇ-ಪಿಇಎನ್/353/2022</u>

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

155 C